ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 4/6/2020

# ಸುವರ್ಣಸೌಧಕ್ಕೆ ಕಚೇರಿ ಸ್ಥಳಾಂತರಕ್ಕೆ ಸೂಚನೆ

4/6/20

**ಸಂ.ಕ. ಸಮಾಚಾರ ಬೆಂಗಳೂರು,**

ರಾಜ್ಯಮಟ್ಟದ ಕೆಲವು ಸರ್ಕಾರಿ ಕಚೇರಿಗಳನ್ನು ಒಂದು ತಿಂಗಳಿನಲ್ಲಿ ಗುರುತಿಸಿ ಅವುಗಳನ್ನು ಬೆಳಗಾವಿಯ ಸುವರ್ಣಸೌಧಕ್ಕೆ ಸ್ಥಳಾಂತರಿಸಲು ಕಾರ್ಯಗತವಾಗುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಗೃಹಕಚೇರಿ ಕೃಷ್ಣಾದಲ್ಲಿ ನಡೆದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಪ್ರಗತಿಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಂಗಳೂರಿನಿಂದ ಯಾವ ಕಚೇರಿಗಳನ್ನು ಸುವರ್ಣ ಸೌಧಕ್ಕೆ ಸ್ಥಳಾಂತರಿಸಬೇಕು ಎನ್ನುವುದನ್ನು ಗಂಭೀರವಾಗಿ ಪರಿಗಣಿಸಬೇಕು ಮುಂದಿನ ಸಭೆಯಲ್ಲಿ ಹಲವಾರು ಕಚೇರಿಗಳು ಅಲ್ಲಿ ಕೆಲಸ ನಿರ್ವಹಿಸುವುದನ್ನು ಖುದ್ದಾಗಿ ಪರಿಶೀಲಿಸುವುದಾಗಿ ಅವರು ಹೇಳಿದರು.



ಗೃಹಕಚೇರಿ ಕೃಷ್ಣಾದಲ್ಲಿ ಬುಧವಾರ ನಡೆದ ಲೋಕೋಪಯೋಗಿ ಇಲಾಖೆಯ ಪ್ರಗತಿಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಲೋಕೋಪಯೋಗಿ ಇಲಾಖೆ ಸಚಿವ ಗೋವಿಂದ ಕಾರಜೋಳ, ಸರ್ಕಾರದ ಮುಖ್ಯಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್ ಮುಂತಾದವರು ಉಪಸ್ಥಿತರಿದ್ದರು.

ಪ್ರವಾಹದಿಂದ ಹಾಳಾಗಿರುವ ರಸ್ತೆ, ಸೇತುವೆ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪೂರ್ಣಗೊಳಿಸಬೇಕು.

ಇಂಜಿನಿಯರ್‌ಗಳ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿರುವುದರಿಂದ ನಿರುದ್ಯೋಗಿ ಇಂಜಿನಿಯರ್‌ಗಳನ್ನು ಟ್ರೈನಿಗಳೆಂದು ನೇಮಕ ಮಾಡಲು ಮುಖ್ಯಮಂತ್ರಿಗಳು ಆದೇಶಿಸಿದರು.

ರಾಜ್ಯದಲ್ಲಿ ಪ್ರವಾಹ ಕಾಮಗಾರಿಗಳನ್ನು 500 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಂಡಿದ್ದು, ಪ್ರವಾಹದಿಂದ ಹಾಳಾಗಿರುವ 1800 ರಸ್ತೆ ಕಾಮಗಾರಿಗಳ ಪೈಕಿ 1700 ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿವೆ. ಸೇತುವೆ ನಿರ್ಮಾಣ, ದುರಸ್ತಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಶಿವಮೊಗ್ಗ ನಗರದ ಸೋಗಾನೆ ಗ್ರಾಮದಲ್ಲಿ ವಿಮಾನ ನಿಲ್ದಾಣದ ನಿರ್ಮಾಣ ಕಾಮಗಾರಿಯನ್ನು ಒಂದು ವರ್ಷದ ಅವಧಿಯಲ್ಲಿ ಪೂರ್ಣಗೊಳಿಸಬೇಕು. ವಿಜಯಪುರ ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಜಮೀನನ್ನು ಈಗಾಗಲೇ ಗುರುತಿಸಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಪುನರ್ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಗಳು ತಿಳಿಸಿದರು.

ರಾಜ್ಯದ 1650 ಕಿ.ಮೀ ಉದ್ದದ ಗ್ರಾಮೀಣ ರಸ್ತೆಯನ್ನು ಜಿಲ್ಲಾ ಮುಖ್ಯ ರಸ್ತೆಯನ್ನಾಗಿ ಹಾಗೂ 10,110 ಕಿ.ಮೀ ಜಿಲ್ಲಾ ಮುಖ್ಯ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಸಭೆಯಲ್ಲಿ ತೀರ್ಮಾನಿಸಲಾಯಿತು.

ಲೋಕೋಪಯೋಗಿ ಇಲಾಖೆ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಮಾತನಾಡಿ

ವಿವಿಧ ಇಂಜಿನಿಯರಿಂಗ್ ಇಲಾಖೆಗಳ ದರಪಟ್ಟಿಯನ್ನು ಪರಿಶೀಲಿಸಿ ರಾಜ್ಯಾದ್ಯಾಂತ ಏಕರೂಪ ದರಪಟ್ಟಿಯನ್ನು ಪ್ರಕಟಿಸಲು ಇಲಾಖೆಯ ನಿವೃತ್ತ ಅಧಿಕಾರಿಗಳ ತಾಂತ್ರಿಕ ಸಮಿತಿ ಅಧ್ಯಯನ ನಡೆಸುತ್ತಿದ್ದು, ಶೀಘ್ರದಲ್ಲಿಯೇ ವರದಿ ಸಲ್ಲಿಸಲಿದ್ದಾರೆ. ಏಕರೂಪ ದರಪಟ್ಟಿ ಹೊರಬಂದಲ್ಲಿ ಇಲಾಖೆಗೆ ನೂರಾರು ಕೋಟಿ ರೂ.ಗಳನ್ನು ಸರ್ಕಾರಕ್ಕೆ ಉಳಿಸಬಹುದಾಗಿದೆ ಎಂದು ತಿಳಿಸಿದರು.

ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಲೋಕೋಪಯೋಗಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.